# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | | **88** |
| **ಮಾನ್ಯ ಸದಸ್ಯರ ಹೆಸರು** | | ಡಾ. ಚಂದ್ರಶೇಖರ ಬಸವರಾಜ ಪಾಟೀಲ (ಪದವೀದರ ಕ್ಷೇತ್ರ) |
| **ಉತ್ತರಿಸುವ ಸಚಿವರು** | | **ಉನ್ನತ ಶಿಕ್ಷಣ ಸಚಿವರು** |
| **ಉತ್ತರಿಸಬೇಕಾದ ದಿನಾಂಕ** | | **15.07.2024** |
| **ಪ್ರಶ್ನೆ** | | **ಉತ್ತರ** |
| ಅ | ಕಲ್ಯಾಣ ಕರ್ನಾಟಕದ ಭಾಗದಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಪ್ರಾಧ್ಯಾಪಕರುಗಳ ಸಂಖ್ಯೆ ಎಷ್ಟು; | ಕಲ್ಯಾಣ ಕರ್ನಾಟಕದ ಭಾಗದಲ್ಲಿರುವ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಪ್ರಾಧ್ಯಾಪಕರುಗಳ ವಿವರ ಹಾಗೂ ಅವುಗಳ ಭರ್ತಿಗೆ ಸರ್ಕಾರವು ಕೈಗೊಂಡಿರುವ ಕ್ರಮದ ಮಾಹಿತಿಯು ಈ ಕೆಳಕಂಡಂತಿದೆ. |
| ಆ | ಸದರಿ ಹುದ್ದೆಗಳ ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು? | (ಕೆಳಗಿನ ಕೋಷ್ಟಕ ನೋಡಿ) |

| ಕ್ರ. ಸಂ. | ವಿಶ್ವವಿದ್ಯಾಲಯ | ಪ್ರಾಧ್ಯಾಪಕರುಗಳ ಸಂಖ್ಯೆ | ಸದರಿ ಹುದ್ದೆಗಳ ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮ |
|---|---|---|---|
| 1 | ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ | 11 | ವಿಶ್ವವಿದ್ಯಾನಿಲಯದಿಂದ ಪ್ರಸ್ತಾವನೆಯನ್ನು ನಿರೀಕ್ಷಿಸಲಾಗಿದೆ. |
| 2 | ಕನ್ನಡ ವಿಶ್ವವಿದ್ಯಾಲಯ, ಹಂಪಿ | 01 | ಸರ್ಕಾರಕ್ಕೆ ಪ್ರಸ್ತಾವನೆ ಸ್ವೀಕೃತವಾಗಿದ್ದು, ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಆರ್ಥಿಕ ಇಲಾಖೆಯ ನಮೂನೆಯನುಸಾರ ಮಾಹಿತಿ ಸಲ್ಲಿಸುವಂತೆ ವಿಶ್ವವಿದ್ಯಾಲಯಕ್ಕೆ ತಿಳಿಸಲಾಗಿರುತ್ತದೆ. |
| 3 | ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ | 02 | ವಿಶ್ವವಿದ್ಯಾನಿಲಯದಿಂದ ಪ್ರಸ್ತಾವನೆಯನ್ನು ನಿರೀಕ್ಷಿಸಲಾಗಿದೆ |
| 4 | ಬೀದರ್ ವಿಶ್ವವಿದ್ಯಾಲಯ | 04 | ಸರ್ಕಾರಕ್ಕೆ ಪ್ರಸ್ತಾವನೆ ಸ್ವೀಕೃತವಾಗಿದ್ದು, ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಆರ್ಥಿಕ ಇಲಾಖೆಯ ನಮೂನೆಯನುಸಾರ ಮಾಹಿತಿ ಸಲ್ಲಿಸುವಂತೆ ಮತ್ತು ಗುಲ್ಬರ್ಗಾ ವಿಶ್ವವಿದ್ಯಾಲಯದಿಂದ ಬೀದರ್ ವಿಶ್ವವಿದ್ಯಾಲಯಕ್ಕೆ ವರ್ಗಾವಣೆಗೊಂಡ ಬೋಧಕ ಮತ್ತು ಬೋಧಕೇತರ ಹುದ್ದೆಗಳಿಗೆ ಸಂಬಂಧಿಸಿದಂತೆ ಆದೇಶದ ಪ್ರತಿಗಳೊಂದಿಗೆ ಪ್ರಸ್ತಾವನೆ ಸಲ್ಲಿಸುವಂತೆ ವಿಶ್ವವಿದ್ಯಾಲಯಕ್ಕೆ ತಿಳಿಸಲಾಗಿರುತ್ತದೆ. |
| 5 | ರಾಯಚೂರು ವಿಶ್ವವಿದ್ಯಾಲಯ | 02 | 02 ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದಿಂದ ಅನುಮತಿ ನೀಡಿದ್ದು, ವಿಶ್ವವಿದ್ಯಾನಿಲಯವು ದಿನಾಂಕ: 08.07.2024ರಂದು ನೇಮಕಾತಿ ಅಧಿಸೂಚನೆ ಹೊರಡಿಸಿರುತ್ತದೆ. |
| 6 | ಗುಲ್ಬರ್ಗಾ ವಿಶ್ವವಿದ್ಯಾಲಯ | 26 | ಸದರಿ ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ಸರ್ಕಾರದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಮೀಸಲಾತಿ ಆದೇಶಗಳನುಸಾರ ರೋಸ್ಟರ್ ಬಿಂದುಗಳನ್ನು ಗುರುತಿಸಿ ನೀಡುವಂತೆ ವಿಶ್ವವಿದ್ಯಾನಿಲಯಕ್ಕೆ ತಿಳಿಸಲಾಗಿರುತ್ತದೆ. |

ಸಂಖ್ಯೆ: ಇಡಿ 142 ಯುಎನ್ಇ 2024

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು

ಡಾ.ಎಂ.ಸಿ ಸುಧಾಕರ್ ಎಂ.ಡಿ.ಎಸ್
ಉನ್ನತ ಶಿಕ್ಷಣ ಸಚಿವರು